# Akashvani : Bangalore
# Regional Bulletin In Kannada
# 27.10.2025 / 6.40 pm

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

೧. ರಾಜ್ಯದಲ್ಲಿ ಮೂರು ಅತ್ಯಾಧುನಿಕ ಬೀಜ ಸಂಸ್ಕರಣಾ ಘಟಕ- ವರ್ಚುವಲ್ ಮೂಲಕ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಉದ್ಘಾಟನೆ

೨. ನಾಯಕತ್ವ ಬದಲಾವಣೆ ವಿಚಾರದಲ್ಲಿ ಹೈಕಮಾಂಡ್ ತೀರ್ಮಾನವೇ ಅಂತಿಮ - ಮುಖ್ಯಮಂತ್ರಿ ಸಿದ್ದರಾಮಯ್ಯ

೩. ಬೀದಿನಾಯಿಗಳ ಕುರಿತಂತೆ ಕೈಗೊಂಡ ಕ್ರಮದ ಬಗ್ಗೆ ವರದಿ ಸಲ್ಲಿಸದ ರಾಜ್ಯ ಸರ್ಕಾರಕ್ಕೆ ಸುಪ್ರೀಂಕೋರ್ಟ್ ಎಚ್ಚರಿಕೆ

೪. ಮೋಂಥಾ ಚಂಡಮಾರುತ ಹಿನ್ನೆಲೆ ; ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಇಂದಿನಿಂದ ಧಾರಾಕಾರ ಮಳೆ

೫. ಮಂಗಳೂರಿನಲ್ಲಿ ಅಂತಾರಾಷ್ಟ್ರೀಯ ಬ್ಯಾಡ್ಮಿಂಟನ್ ಪಂದ್ಯಾವಳಿಗೆ ಚಾಲನೆ ; ೧೨ ದೇಶಗಳ ಕ್ರೀಡಾಪಟುಗಳು ಭಾಗಿ

************

ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ನವದೆಹಲಿಯಲ್ಲಿಂದು ರಾಷ್ಟ್ರೀಯ ಬೀಜ ನಿಗಮ- ಎನ್‌ಎಸ್‌ಸಿಯ ಅತ್ಯಾಧುನಿಕ ಬೀಜ ಸಂಸ್ಕರಣಾ ಘಟಕವನ್ನು ಉದ್ಘಾಟಿಸಿದರು. ಇದೇ ವೇಳೆ ಅವರು, ರಾಜ್ಯದ ಧಾರವಾಡ, ಹಾಸನ, ಮತ್ತು ರಾಯಚೂರು ಸೇರಿದಂತೆ ಐದು ಎನ್‌ಎಸ್‌ಸಿ ಬೀಜ ಸಂಸ್ಕರಣಾ ಘಟಕಗಳನ್ನು ವರ್ಚುವಲ್ ಮೂಲಕ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಈ ಘಟಕಗಳು ರೈತರಿಗೆ ಉತ್ತಮ ಗುಣಮಟ್ಟದ ಬೀಜಗಳ ಲಭ್ಯತೆಯನ್ನು ಖಚಿತ ಪಡಿಸಲಿದೆ. ಜೊತೆಗೆ ಕೃಷಿ ಉತ್ಪಾದನೆಯನ್ನು ಗಮನಾರ್ಹವಾಗಿ ಹೆಚ್ಚಿಸಲಿದೆ ಎಂದು ತಿಳಿಸಿದರು.

ಧಾರವಾಡ, ಹಾಸನ, ಮತ್ತು ರಾಯಚೂರು ಘಟಕಗಳು ಗಂಟೆಗೆ ೪ ಟನ್ ಬೀಜಗಳನ್ನು ಸಂಸ್ಕರಿಸಲಿವೆ.

************

ಪಕ್ಷದ ಹೈಕಮಾಂಡ್ ತೀರ್ಮಾನ ಮಾಡಿದರೆ ಐದು ವರ್ಷವೂ ನಾನೇ ಸಿಎಂ ಆಗಿರುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಕ್ಷದಲ್ಲಿ ಹೈ ಕಮಾಂಡ್ ತೀರ್ಮಾನವೇ ಅಂತಿಮ ಎಂದು ತಿಳಿಸಿದ್ದಾರೆ. ಆರೆಸ್ಸೆಸ್ ಮುಖಂಡ ಕಲ್ಲಡ್ಕ ಡಾ.ಪ್ರಭಾಕರ್ ಭಟ್ ವಿರುದ್ಧ ಪ್ರಕರಣ ದಾಖಲಾದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಯಾರೇ ದ್ವೇಷ ಭಾಷಣ ಮಾಡಿದರೂ ಕೇಸು ದಾಖಲಿಸಲಾಗುತ್ತದೆ. ದ್ವೇಷ ಭಾಷಣ ಸಮಾಜದಲ್ಲಿ ಒಡಕು ಸೃಷ್ಟಿಸುತ್ತದೆ ಎಂದು ಹೇಳಿದ್ದಾರೆ.

************

ಕರ್ನಾಟಕದಲ್ಲಿ ಏಕನಾಥ ಶಿಂಧೆ ಹೊರ ಹೊಮ್ಮುವುದು ಸಾಧ್ಯವಿಲ್ಲ ಎಂದು ಲೊಕೋಪಯೋಗಿ ಸಚಿವ ಸತೀಶ್ ಜಾರಕಿ ಹೊಳಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದಿಂದ ಯಾರು ಎಲ್ಲೂ ಹೋಗುವುದಿಲ್ಲ ಎಂದು ಹೇಳಿದ್ದಾರೆ. ಮುಖ್ಯಮಂತ್ರಿ ಯಾರಾಗಬೇಕೆಂದು ಹೈಕಮಾಂಡ್ ನಿರ್ಧರಿಸಲಿದ್ದು, ತಾವು ಯಾವುದೇ ಬೇಡಿಕೆಗಳನ್ನು ಇಡುವುದರಲ್ಲಿ ಅರ್ಥವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಹೈಕಮಾಂಡ್ ರಾಜ್ಯದಲ್ಲಿ ಯಾವುದೇ ನವೆಂಬರ್ ಕ್ರಾಂತಿಗೆ ಅವಕಾಶ ನೀಡುವುದಿಲ್ಲ ಎಂದು ತಿಳಿಸಿದ್ದಾರೆ. ಇದೇ ವೇಳೆ ಯತೀಂದ್ರ ಸಿದ್ಧರಾಮಯ್ಯ ಹೇಳಿಕೆ ಕುರಿತಂತೆ ಪ್ರತಿಕ್ರಿಯಿಸಿ, ಅವರು ಮುಖ್ಯಮಂತ್ರಿ ಹುದ್ದೆ ಅಥವಾ ಪಕ್ಷದ ನಾಯಕತ್ವದ ಬಗ್ಗೆ ಮಾತನಾಡಿಲ್ಲ. ಸಿದ್ಧಾಂತದ ಬಗ್ಗೆ ಮಾತ್ರ ಮಾತನಾಡಿದ್ದಾರೆ ಎಂದು ಹೇಳಿದ್ದಾರೆ.

************

ಬೀದಿನಾಯಿಗಳ ಹಾವಳಿ ವಿಚಾರವಾಗಿ ಕೈಗೊಂಡ ಕ್ರಮಗಳ ಬಗ್ಗೆ ವರದಿ ಸಲ್ಲಿಸದ ಕರ್ನಾಟಕ ಸೇರಿದಂತೆ ಇತರೆ ರಾಜ್ಯಗಳಿಗೆ ಸುಪ್ರೀಂಕೋರ್ಟ್ ಎಚ್ಚರಿಕೆ ನೀಡಿದೆ. ಪಶ್ಚಿಮಬಂಗಾಳ, ದೆಹಲಿ, ತೆಲಂಗಾಣ ಹೊರತುಪಡಿಸಿ ಉಳಿದ ರಾಜ್ಯಗಳ ಮುಖ್ಯಕಾರ್ಯದರ್ಶಿಗಳು ಅನುಸರಣಾ ವರದಿಗಳನ್ನು ಸಲ್ಲಿಸಲು ವಿಫಲವಾದ ಹಿನ್ನೆಲೆಯಲ್ಲಿ ವಿಚಾರಣೆಗೆ ಹಾಜರಾಗುವಂತೆ ನಿರ್ದೇಶನ ನೀಡಿದೆ. ನ್ಯಾಯಮೂರ್ತಿಗಳಾದ ವಿಕ್ರಂನಾಥ್, ಸಂದೀಪ್ ಮೆಹ್ತಾ, ಎಲ್.ಇ.ಅಂಜಾರಿಯಾ ಪೀಠವು ನವೆಂಬರ್ ೩ರಂದು ನಡೆಯಲಿರುವ ಮುಂದಿನ ವಿಚಾರಣೆಗೆ ಅಧಿಕಾರಿಗಳು ಹಾಜರಾಗದಿದ್ದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದೆ.

************

ಹುಲಿ ದಾಳಿಯಂತಹ ಘಟನೆಗಳು ಮರುಕಳಿಸದಂತೆ ಮುಂಜಾಗರೂಕತಾ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಬಿ ಖಂಡ್ರೆ  ತಿಳಿಸಿದ್ದಾರೆ. ಮೈಸೂರಿನ ಕೆ.ಆರ್. ಆಸ್ಪತ್ರೆಯ ಶವಾಗಾರಕ್ಕೆ ಭೇಟಿ ನೀಡಿ, ಹುಲಿ ದಾಳಿಯಿಂದ ಮೃತಪಟ್ಟ ರಾಜಶೇಖರ್ ಮೃತದೇಹಕ್ಕೆ ಅಂತಿಮ ನಮನ ಸಲ್ಲಿಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹುಲಿಯ ಓಡಾಟದ ಬಗ್ಗೆ ದೂರು ಬಂದಿದ್ದರೂ ಬೋನು ಇಡುವಲ್ಲಿ ಅಧಿಕಾರಿಗಳು ನಿರ್ಲಕ್ಷ್ಯ ತೋರಿದ್ದರೆ, ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

************

ಬೆಂಗಳೂರಿನಲ್ಲಿ ಸುರಂಗ ಮಾರ್ಗ ನಿರ್ಮಾಣ ಮಾಡಿದರೆ  ಆಪತ್ತು ಕಟ್ಟಿಟ್ಟ ಬುತ್ತಿ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸುರಂಗ ಯೋಜನೆ ವಿರುದ್ಧ ಈಗಾಗಲೇ ಹಲವು ಸಂಸ್ಥೆಗಳು- ಪರಿಸರವಾದಿಗಳು ಧ್ವನಿ ಎತ್ತಿದ್ದಾರೆ. ಆದರೂ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸುರಂಗ ಮಾರ್ಗ ನಿರ್ಮಾಣಕ್ಕೆ ಉತ್ಸಾಹ ತೋರುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

************

ಯಾವುದೇ ಒಂದು ಖಾಯಿಲೆಗೆ ಪ್ರಾಥಮಿಕ ಹಂತದಲ್ಲೇ ಸೂಕ್ತ ಚಿಕಿತ್ಸೆ ಪಡೆಯುವುದರಿಂದ ರೋಗಗಳನ್ನು ತಡೆಗಟ್ಟಬಹುದಾಗಿದೆ ಎಂದು ಕ್ಯಾನ್ಸರ್ ತಜ್ಞ ಡಾ. ರೋಹಿತ್ ಕುಮಾರ್ ತಿಳಿಸಿದ್ದಾರೆ. ಕೋಲಾರದಲ್ಲಿ ಸ್ತನ ಕ್ಯಾನ್ಸರ್ ಅಂಗವಾಗಿ ಪಿಂಕ್ ವಾಕ್ ಜಾಥಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ದೇಶದಲ್ಲಿ ವರ್ಷಕ್ಕೆ ಸುಮಾರು ೨ ಲಕ್ಷ ಜನ ಮಹಿಳೆಯರು ಸ್ತನ ಕ್ಯಾನ್ಸರ್‌ಗೆ ತುತ್ತಾದರೆ ಸುಮಾರು ೯೦ ಸಾವಿರ ಮಂದಿ ಸಾವನ್ನಪ್ಪುತ್ತಿದ್ದಾರೆ. ಮಹಿಳೆಯರಲ್ಲಿ ಕಂಡು ಬರುವ ಸ್ತನ ಕ್ಯಾನ್ಸರ್ ಅನ್ನು ಮೊದಲ ಹಂತದಲ್ಲೇ ಪತ್ತೆಹಚ್ಚುವುದರಿಂದ ಗುಣಪಡಿಸಬಹುದಾಗಿದೆ ಎಂದು ಹೇಳಿದ್ದಾರೆ.

ಧ್ವನಿ- ಡಾ. ರೋಹಿತ್ ಕುಮಾರ್, ಕ್ಯಾನ್ಸರ್ ತಜ್ಞ (  ಸೆಕೆಂಡುಗಳು)

************

ತಾಯಿ ಮತ್ತು ಶಿಶು ಮರಣ ಪ್ರಕರಣಗಳು ಹೆಚ್ಚಳವಾಗದಂತೆ ವೈದ್ಯಾಧಿಕಾರಿಗಳು ಸೂಕ್ತ ಕ್ರಮವಹಿಸಿ ಎಚ್ಚರಿಕೆಯಿಂದ ಕರ್ತವ್ಯ ನಿರ್ವಹಿಸಬೇಕು ಎಂದು ವಿಜಯನಗರ ಜಿಲ್ಲಾಧಿಕಾರಿ

ಕವಿತಾ.ಎಸ್.ಮನ್ನಿಕೇರಿ ಸೂಚಿಸಿದ್ದಾರೆ. ತಾಯಂದಿರ, ಶಿಶು ಮತ್ತು ಮಕ್ಕಳ ಮರಣ ಲೆಕ್ಕಪರಿಶೋಧನೆ ಸಭೆಯಲ್ಲಿ ಮಾತನಾಡಿದ ಅವರು. ಎಲ್ಲಾ ಆಸ್ಪತ್ರೆಗಳಲ್ಲಿ ಗುಣಮಟ್ಟದ ಆರೋಗ್ಯ ಸೇವೆ ನೀಡುವಲ್ಲಿ ವೈದ್ಯರು ಕರ್ತವ್ಯ ನಿರ್ವಹಿಸಬೇಕು. ರೋಗಿಗಳ ತಪಾಸಣೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ನಿರ್ದೇಶನ ನೀಡಿದ್ದಾರೆ.

************

ಮಂಡ್ಯ ಜಿಲ್ಲೆಯಲ್ಲಿ ಕ್ಷಯ ರೋಗ ನಿರ್ಮೂಲನೆ ಮಾಡಲು ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ ಕುಮಾರ ಸೂಚಿಸಿದ್ದಾರೆ. ಮಂಡ್ಯದಲ್ಲಿಂದು ಟಿ.ಬಿ ಫೋರಂ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಕ್ಷಯ ರೋಗ ಲಕ್ಷಣಗಳು ಕಂಡು ಬರುವ ಮಧುಮೇಹಿಗಳು, ಧೂಮಪಾನಿಗಳು, ಕ್ಯಾನ್ಸರ್ ಪೀಡಿತರು, ಸಕ್ಕರೆ ಖಾಯಿಲೆ ರೋಗಿಗಳು, ವೃದ್ಧರು, ಮಕ್ಕಳು ಹಾಗೂ ಅಪೌಷ್ಟಿಕತೆಯಿಂದ ಬಳಲುತ್ತಿರುವವರಿಗೆ ಉಚಿತವಾಗಿ ಕ್ಷಯ ರೋಗ ತಪಾಸಣೆ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ. ಕ್ಷಯರೋಗ ದೃಡಪಟ್ಟ ರೋಗಿಗಳಿಗೆ ೬ತಿಂಗಳ ಕಾಲ ಆಶಾ ಕಾರ್ಯಕರ್ತೆಯರ ಮೂಲಕ ಉಚಿತವಾಗಿ ಔಷಧಿಗಳನ್ನು ಒದಗಿಸಲಾಗುವುದು ಎಂದು ಹೇಳಿದ್ದಾರೆ.

---

ಕೇಂದ್ರ ಸರ್ಕಾರದ ಮನ್ರೇಗಾ ಯೋಜನೆಯ ಕೂಲಿಕಾರರಿಗೆ ಇ-ಕೆವೈಸಿ ಕಡ್ಡಾಯಗೊಳಿಸಲಾಗಿದೆ. ಕೃಷಿ ಕೂಲಿ ಕಾರ್ಮಿಕರು ಇದೇ ೩೧ ರೊಳಗೆ ಇ-ಕೆವೈಸಿ ಮಾಡಿಸಿಕೊಳ್ಳಬೇಕೆಂದು ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ತಿಳಿಸಿದ್ದಾರೆ. ಜಿಲ್ಲೆಯ ಮನ್ರೇಗಾ ಕೂಲಿಕಾರರು ಕಡ್ಡಾಯವಾಗಿ ಇ-ಕೆವೈಸಿ ಮಾಡಿಸಿಕೊಳ್ಳಬೇಕು. ಇಲ್ಲವಾದ್ದಲ್ಲಿ, ಕೂಲಿಕಾರರ ಉದ್ಯೋಗ ಚೀಟಿ ರದ್ದು ಗೊಳಿಸಲಾಗುವುದೆಂದು ಅವರು ಹೇಳಿದ್ದಾರೆ.

************

ಇಂದು ಕರಾವಳಿ ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗಿದೆ. ಉತ್ತರ ಹಾಗೂ ದಕ್ಷಿಣ ಒಳನಾಡಿನ ಕೆಲವು ಜಿಲ್ಲೆಗಳಲ್ಲಿ ಮಳೆಯಾಗುತ್ತಿದೆ. ಮೋಂಥಾ ಚಂಡಮಾರುತದ ಪ್ರಭಾವದಿಂದ ಕರಾವಳಿ ಜಿಲ್ಲೆಗಳಲ್ಲಿ ಇಂದಿನಿಂದ ಇನ್ನೆರಡು ದಿನಗಳ ಕಾಲ ವ್ಯಾಪಕ ಮಳೆಯಾಗಲಿದೆ. ಮೀನುಗಾರರು ಸಮುದ್ರಕ್ಕಿಳಿಯದಂತೆ ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ಉತ್ತರ ಹಾಗೂ ದಕ್ಷಿಣ ಒಳನಾಡಿನಲ್ಲೂ ಇಂದು ಮತ್ತೆ ನಾಳೆ ಭಾರೀ ಮಳೆಯಾಗುವ ಸಂಭವವಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ. ಸಿ.ಎಸ್. ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲೂ ಮೋಡ ಕವಿದ ವಾತವರಣವಿದ್ದು ಹಗುರದಿಂದ ಸಾಧಾರಣ ಮಳೆಯಾಗಲಿದೆ.

ಧ್ವನಿ : ಸಿ.ಎಸ್. ಪಾಟೀಲ್, ಹವಾಮಾನ ಇಲಾಖೆ ನಿರ್ದೇಶಕ (೪೦ ಸೆಕೆಂಡುಗಳು)

************

ಮಂಗಳೂರಿನಲ್ಲಿ ಇಂದಿನಿಂದ ನವೆಂಬರ್ ೨ರವರೆಗೆ ನಡೆಯಲಿರುವ 'ಚೀಫ್‌ಮಿನಿಸ್ಟರ್ಸ್ ಮಂಗಳೂರು ಇಂಡಿಯಾ ಇಂಟರ್‌ನ್ಯಾಷನಲ್ ಚಾಲೆಂಜ್ ೨೦೨೫- ಅಂತಾರಾಷ್ಟ್ರೀಯ ಮಟ್ಟದ ಬ್ಯಾಡ್ಮಿಂಟನ್ ಪಂದ್ಯಾವಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ರಾಜ್ಯಸರ್ಕಾರ ಕ್ರೀಡೆಗೆ ವಿಶೇಷ ಒತ್ತು ನೀಡಿದೆ ಎಂದು ತಿಳಿಸಿದರು. ಪಂದ್ಯಾವಳಿಯಲ್ಲಿ ಭಾರತ, ಅಮೆರಿಕಾ, ರಷ್ಯಾ, ಯುಎಇ, ಮಲೇಷ್ಯಾ, ಕೆನಡಾ ಇಂಡೋನೇಷ್ಯಾ, ಶ್ರೀಲಂಕಾ, ಥೈಲ್ಯಾಂಡ್, ಬಾಂಗ್ಲಾದೇಶ, ಸಿಂಗಾಪುರ, ಇಂಗ್ಲೆಂಡ್ ಸೇರಿದಂತೆ ೧೨ ದೇಶಗಳ ಸುಮಾರು ೪೫೦ಕ್ಕೂ ಅಧಿಕ ಕ್ರೀಡಾಪಟುಗಳು ಭಾಗವಹಿಸುತ್ತಿದ್ದಾರೆ. ಪುರುಷರ ಸಿಂಗಲ್ಸ್, ಮಹಿಳಾ ಸಿಂಗಲ್ಸ್, ಪುರುಷರ ಡಬಲ್ಸ್, ಮಹಿಳಾ ಡಬಲ್ಸ್, ಮಿಕ್ಸೆಡ್ ಡಬಲ್ಸ್ ವಿಭಾಗಗಳಲ್ಲಿ ಪಂದ್ಯ ನಡೆಯಲಿದೆ.

************

ಶಿವಮೊಗ್ಗದಲ್ಲಿ ನಡೆಯುತ್ತಿರುವ ರಣಜಿ ಟ್ರೋಫಿ ಪಂದ್ಯಾವಳಿಯಲ್ಲಿ ೩ನೇ ದಿನವಾದ ಇಂದು ಕರ್ನಾಟಕ ನೀಡಿರುವ ೩೬೧ ರನ್‌ಗಳ ಗುರಿ ಬೆನ್ನತ್ತಿರುವ ಗೋವಾ ತಂಡ ದಿನದ ಅಂತ್ಯಕ್ಕೆ ೬ ವಿಕೆಟ್ ನಷ್ಟಕ್ಕೆ ೧೬೧ ರನ್‌ಗಳಿಸಿದೆ. ಕರ್ನಾಟಕ ೨೦೦ ರನ್‌ಗಳ ಮುನ್ನಡೆಯಲ್ಲಿದೆ. ಗೋವಾ ಪರ ಅರ್ಜುನ್ ತೆಂಡುಲ್ಕರ್ ೪೩ ರನ್ ಗಳಿಸಿ ಆಡುತ್ತಿದ್ದಾರೆ. ಅಭಿಲಾಷ್ ಶೆಟ್ಟಿ ೩ ವಿಕೆಟ್ ಪಡೆದರೆ ವಿದ್ವತ್ ಕಾವೇರಪ್ಪ ೨ ವಿಕೆಟ್ ಪಡೆದಿದ್ದಾರೆ.

************